# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ.ಎಸ್.ಅರುಣ್, ಇವರ ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.

**ಸೂಚನೆ:**

ನಗರಾಭಿವೃದ್ಧಿ ಇಲಾಖೆಯಿಂದ ಹಂಚಿಕೆ ಮಾಡುವ ಸಿ.ಎ ನಿವೇಶನಗಳಿಗಾಗಿ ಸಾರ್ವಜನಿಕರ ನಿರಾಸಕ್ತಿ ಸಿ.ಎ ನಿವೇಶನಗಳ ಗುತ್ತಿಗೆಯನ್ನು ವಿಸ್ತರಿಸುವ ಸಂದರ್ಭದಲ್ಲಿ ಇಲಾಖೆ ಅನುಸರಿಸುತ್ತಿರುವ ನೀತಿಯಲ್ಲಿನ ಗೊಂದಲಗಳ ಬಗ್ಗೆ ಕುರಿತು ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುತ್ತೇನೆ.

**ಉತ್ತರ**

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರಿಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು 1991ರ ನಿಯಮ 8(1) ರಲ್ಲಿ ನಾಗರಿಕ ಸೌಲಭ್ಯ ನಿವೇಶನಗಳ ಗುತ್ತಿಗೆ ಹಣವನ್ನು ನಿಗದಿಪಡಿಸಲು ಈ ಕೆಳಕಂಡಂತೆ ಅವಕಾಶ ಕಲ್ಪಿಸಲಾಗಿದೆ.

> 8(1) The lease amount of the site to be allotted on lease basis shall be fixed by the authority provided the value of the site per Sq.mtrs. is fixed at not less than the value per Sq.mtrs. of the largest residential site in that area:

ಕರ್ನಾಟಕ ಯೋಜನಾ ಪ್ರಾಧಿಕಾರಗಳ (ನಾಗರೀಕ ಸೌಕರ್ಯ ನಿವೇಶನಗಳ ಹಂಚಿಕೆ) 2016 ನಿಯಮ 13(1) ನಾಗರಿಕ ಸೌಲಭ್ಯ ನಿವೇಶನಗಳ ಗುತ್ತಿಗೆ ಹಣವನ್ನು ನಿಗದಿಪಡಿಸಲು ಈ ಕೆಳಕಂಡಂತೆ ಅವಕಾಶ ಕಲ್ಪಿಸಲಾಗಿದೆ.

> The lease amount of the site to be allotted on lease basis shall be fixed by the authority, provided the value of the Civic Amentiy site per sq. mtr shall be fixed at not less than the market value per sq. mtr. Of the residential site in the layout.

ರಾಜ್ಯದಲ್ಲಿನ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಮತ್ತು ನಗರ ಯೋಜನಾ ಪ್ರಾಧಿಕಾರಗಳಲ್ಲಿ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ) ನಿಯಮಗಳು 1991 ರನ್ವಯ ಹಾಗೂ ಕರ್ನಾಟಕ ಯೋಜನಾ ಪ್ರಾಧಿಕಾರಗಳ (ನಾಗರೀಕ ಸೌಕರ್ಯ ನಿವೇಶನಗಳ ಹಂಚಿಕೆ) 2016 ರನ್ವಯ ಕ್ರಮವಾಗಿ ನಾಗರೀಕ ಸೌಲಭ್ಯ ನಿವೇಶನಗಳನ್ನು ಹಂಚಿಕೆ ಮಾಡಲಾಗುತ್ತಿದೆ.

ನಾಗರೀಕ ಸೌಲಭ್ಯ ನಿವೇಶನಗಳನ್ನು ಹಂಚಿಕೆ ಮಾಡಲು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ) ನಿಯಮಗಳು 1991ರ ನಿಯಮ 7 ಉಪ ನಿಯಮ (3) ರನ್ವಯ "ನಾಗರಿಕ ಸೌಲಭ್ಯಗಳುಳ್ಳ ನಿವೇಶನಗಳ ಹಂಚಿಕೆಯ ಸಮಿತಿ"ಯನ್ನು ರಚಿಸಬಹುದಾಗಿದೆ. ಸದರಿ ಸಮಿತಿಯು ನಿಯಮ 7(1) ರಲ್ಲಿನ ಅಂಶಗಳೊಂದಿಗೆ ಪರಿಶೀಲಿಸಿ ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ ಮಾಡಲು ಸಮಿತಿಯು ತೀರ್ಮಾನ ಕೈಗೊಳ್ಳುತ್ತದೆ. ಸದರಿ ತೀರ್ಮಾನವು ಪ್ರಾಧಿಕಾರದ ಅನುಮೋದನೆಗೆ ಒಳಪಟ್ಟಿರುತ್ತದೆ.

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು-1991 ನಿಯಮ-8(1)ರ ರೀತ್ಯಾ ಉಪನೋಂಧಣಾಧಿಕಾರಿಗಳ ಮಾರ್ಗಸೂಚಿ ಬೆಲೆಯನ್ನು ಅನುಸರಿಸಿ ಗುತ್ತಿಗೆ ಮೊತ್ತದ ದರವನ್ನು ನಿಗಧಿಪಡಿಸಬೇಕಾಗುತ್ತದೆ. ಅದರಂತೆ

ಸಂಬಂಧಪಟ್ಟ ನಗರಾಭಿವೃದ್ಧಿ ಪ್ರಾಧಿಕಾರಗಳು ಮತ್ತು ನಗರ ಯೋಜನಾ ಪ್ರಾಧಿಕಾರಗಳು ನಾಗರೀಕ ಸೌಕರ್ಯ ನಿವೇಶನಗಳನ್ನು ಗುತ್ತಿಗೆ ಆಧಾರದ ಮೇಲೆ 30 ವರ್ಷಗಳ ಅವಧಿಗೆ ನೀಡುತ್ತಿರುತ್ತದೆ.

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು-1991 8(1) ರಂತೆ ಗುತ್ತಿಗೆ ಮೌಲ್ಯದ ಹೆಚ್ಚುವರಿ ಶೇ.50 ರಂತೆ ಗುತ್ತಿಗೆ ಮೌಲ್ಯವನ್ನು ನಿಗಧಿಪಡಿಸಿ ನಿಯಮ-10 (14)ರನ್ವಯ ಸಿ.ಎ ನಿವೇಶನಗಳ ನವೀಕರಣವನ್ನು ಸರ್ಕಾರದ ಪೂರ್ವಾನುಮೋದನೆಯನ್ನು ಪಡೆದು ಮುಂದಿನ 30 ವರ್ಷಗಳ ಅವಧಿಗೆ ಗುತ್ತಿಗೆ ಅವಧಿಯನ್ನು ವಿಸ್ತರಿಸಬೇಕಾಗಿರುತ್ತದೆ.

ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಮತ್ತು ನಗರ ಯೋಜನಾ ಪ್ರಾಧಿಕಾರಗಳಿಗೆ ಸರ್ಕಾರದ ವತಿಯಿಂದ ಯಾವುದೇ ಅನುದಾನವನ್ನು ನೀಡುವುದಿಲ್ಲ. ಪ್ರಾಧಿಕಾರಗಳು ಸ್ವಂತ ಆರ್ಥಿಕ ಸಂಪನ್ಮೂಲಗಳನ್ನು ಕ್ರೋಢೀಕರಿಸಿಕೊಂಡು ಕಾರ್ಯ ನಿರ್ವಹಿಸುತ್ತವೆ.

ನಾಗರಿಕ ಸೌಲಭ್ಯ ನಿವೇಶನವನ್ನು ಗುತ್ತಿಗೆ ಆಧಾರದ ಮೇಲೆ ಸಂಘ ಸಂಸ್ಥೆಗಳಿಗೆ ಮಾರುಕಟ್ಟೆ ಮೌಲ್ಯಕ್ಕಿಂತ ಕಡಿಮೆ ದರವನ್ನು ನಿಗಧಿಗೊಳಿಸಿ ಹಂಚಿಕೆ ಮಾಡಿದ್ದಲ್ಲಿ, ಪ್ರಾಧಿಕಾರಗಳಿಗೆ ಆರ್ಥಿಕ ನಷ್ಟ ಉಂಟಾಗುತ್ತದೆ.

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ) ನಿಯಮಗಳು, 1991 ರ ನಿಯಮ 8(4) ರಂತೆ ಹಾಗೂ ಯೋಜನಾ ಪ್ರಾಧಿಕಾರಗಳು (ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ) ನಿಯಮಗಳು, 2016 ರ ನಿಯಮ 13(4) ರಂತೆ ವಿಕಲಚೇತನರು ಹಾಗೂ ಬುದ್ಧಿಮಾಂದ್ಯರ ಕಲ್ಯಾಣಕ್ಕಾಗಿ ಸ್ಥಾಪಿಸಲಾಗಿರುವ ಸಂಸ್ಥೆಗಳು, ಕೇವಲ ಕನ್ನಡ ಮಾಧ್ಯಮದಲ್ಲಿ ಶಾಲೆಯನ್ನು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳು, ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ವರ್ಗದ ಸಂಸ್ಥೆಗಳು ಮತ್ತು ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರಗಳ ಇಲಾಖೆಗಳು ಮತ್ತು ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದಿಂದ ಸ್ಥಾಪಿಸಲ್ಪಟ್ಟ ನಿಗಮ ಅಥವಾ ಯಾವುದೇ ಸಂಸ್ಥೆಗಳಿಗೆ ಪ್ರಾಧಿಕಾರವು ನಿಗಧಿಪಡಿಸಿದ ಗುತ್ತಿಗೆ ಹಣದ ಪೈಕಿ ಶೇ. 50 ರಷ್ಟರ ದರದಲ್ಲಿ ಹಂಚಿಕೆ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.

ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ ಪ್ರಕ್ರಿಯೆಯು ಸಂಪೂರ್ಣ ಪಾರದರ್ಶಕವಾಗಿದ್ದು, ಒಂದಕ್ಕಿಂತ ಹೆಚ್ಚು ಅರ್ಜಿದಾರರಿದ್ದಲ್ಲಿ ಲಾಟರಿ ಮುಖಾಂತರ ಹಂಚಿಕೆ ಮಾಡುವ ವ್ಯವಸ್ಥೆ ಜಾರಿಯಲ್ಲಿದೆ. ಗುತ್ತಿಗೆ ನವೀಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರಿಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು, 1991 ಮತ್ತು ಕರ್ನಾಟಕ ಯೋಜನಾ ಪ್ರಾಧಿಕಾರಗಳ (ನಾಗರಿಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು, 2016 ರಲ್ಲಿ ಗುತ್ತಿಗೆಯನ್ನು ನವೀಕರಿಸಲು ಸ್ಪಷ್ಟ ಅವಕಾಶವಿರುತ್ತದೆ. ಆದುದರಿಂದ, ಈ ವಿಷಯದಲ್ಲಿ ಯಾವುದೇ ಗೊಂದಲಗಳಿಗೆ ಆಸ್ಪದವಿರುವುದಿಲ್ಲ.

**ಸಂಖ್ಯೆ: ನಅಇ 378 ಬೆಂರೂಪ್ರಾ 2025**

(ಬಿ.ಎಸ್. ಸುರೇಶ)
ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು